# ಕರ್ನಾಟಕ ವಿಧಾನ ಪರಿಷತ್

| | |
|---|---|
| ಮಾನ್ಯ ಸದಸ್ಯರ ಹೆಸರು | : ಶ್ರೀ ಬಸನಗೌಡ ಬಾದರ್ಲಿ(ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : **389** |
| ಉತ್ತರಿಸಬೇಕಾದ ದಿನಾಂಕ | : 10.12.2025 |
| ಉತ್ತರಿಸಬೇಕಾದ ಸಚಿವರು | : ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಿಂಧನೂರು ತಾಲ್ಲೂಕಿನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನಿವೇಶನ/ವಸತಿ ರಹಿತ ಬಡಜನರು ವಾಸವಿರುವುದು ಸರ್ಕಾರದ ಗಮನದಲ್ಲಿದೆಯೇ; | ಹೌದು<br><br>2018ರಲ್ಲಿ ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ವಸತಿ/ನಿವೇಶನರಹಿತರ ಸಮೀಕ್ಷೆ ಕೈಗೊಳ್ಳಲಾಯಿತು. ಸದರಿ ಸಮೀಕ್ಷೆಯನ್ವಯ ಸಿಂಧನೂರು ತಾಲ್ಲೂಕಿನ ವ್ಯಾಪ್ತಿಯಲ್ಲಿ 18640 ವಸತಿರಹಿತರು 6574 ನಿವೇಶನರಹಿತರು ಕಂಡು ಬಂದಿರುತ್ತಾರೆ.<br><br>ಮುಂದುವರೆದು, ಪ್ರಧಾನ ಮಂತ್ರಿ ಆವಾಸ್ ಯೋಜನೆ ನಗರದಡಿ 2016-17 & 2017-18ನೇ ಸಾಲಿನಲ್ಲಿ ರಾಜ್ಯಾದ್ಯಂತ ನಡೆಸಿದ ಬೇಡಿಕೆ ಸಮೀಕ್ಷೆಯ ಪ್ರಕಾರ ಸಿಂಧನೂರು ತಾಲ್ಲೂಕು ವ್ಯಾಪ್ತಿಯಲ್ಲಿ 1719 ವಸತಿರಹಿತರು 253 ನಿವೇಶನರಹಿತರು ಕಂಡು ಬಂದಿರುತ್ತಾರೆ. |
| ಆ) | ಬಂದಿದ್ದಲ್ಲಿ, ಸಿಂಧನೂರು ತಾಲ್ಲೂಕಿನಲ್ಲಿ ಕರ್ನಾಟಕ ರಾಜ್ಯ ವಸತಿ ಇಲಾಖೆಯಿಂದ ನಿವೇಶನ ರಹಿತ ಬಡಜನರಿಗೆ ನಿವೇಶನಗಳನ್ನು ಹಂಚಲು ಹೊಸ ಬಡಾವಣೆಯನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವ ಹಂತದಲ್ಲಿದೆ; ಮಾಹಿತಿ ನೀಡುವುದು? | ಅರ್ಹ ನಿವೇಶನರಹಿತ ಕುಟುಂಬಗಳಿಗೆ ಮುಖ್ಯಮಂತ್ರಿಗಳ ಗ್ರಾಮೀಣ ಹಾಗೂ ಮುಖ್ಯಮಂತ್ರಿಗಳ ನಗರ ನಿವೇಶನ ಯೋಜನೆಗಳಡಿ ನಿವೇಶನ ಹಂಚಿಕೆ ಮಾಡಲಾಗುತ್ತಿದೆ. ನಿವೇಶನ ಹಂಚಿಕೆ ಮಾಡಲು ಸರ್ಕಾರಿ ಜಮೀನಿಗೆ ಪ್ರಥಮ ಆದ್ಯತೆ ನೀಡಲಾಗಿದ್ದು, ಸರ್ಕಾರಿ ಜಮೀನು ಲಭ್ಯವಿಲ್ಲದ ಕಡೆಗಳಲ್ಲಿ ಮಾತ್ರ ವಸತಿಗೆ ಸೂಕ್ತ ಖಾಸಗಿ ಜಮೀನು ಖರೀದಿಸಲು ಜಿಲ್ಲಾ ಜಮೀನು ಖರೀದಿ ಸಮಿತಿ ಮೂಲಕ ಕ್ರಮವಹಿಸಲಾಗುತ್ತಿದೆ.<br><br>ಸಿಂಧನೂರು ತಾಲ್ಲೂಕಿನಲ್ಲಿ ನಿವೇಶನ ಹಂಚಿಕೆಗೆ ಆಶ್ರಯ ಯೋಜನೆಯಡಿ ಮಂಜೂರಾದ ಸರ್ಕಾರಿ/ಖರೀದಿಸಲಾದ ಖಾಸಗಿ ಜಮೀನು ಒಟ್ಟು 21.35 ಎಕರೆ (ಗ್ರಾಮೀಣ ಪ್ರದೇಶದಲ್ಲಿ 9.45 ಮತ್ತು ನಗರ ಪ್ರದೇಶದಲ್ಲಿ 11.90 ಎಕರೆ) ಲಭ್ಯವಿರುತ್ತದೆ. ಸದರಿ ಜಮೀನಿನಲ್ಲಿ ನಿವೇಶನ ಹಂಚಿಕೆಗೆ ಅರ್ಹ ಫಲಾನುಭವಿಗಳನ್ನು ನಿಯಮಾನುಸಾರ ಗ್ರಾಮಸಭೆ/ನಗರ ಆಶ್ರಯ ಸಮಿತಿಯಲ್ಲಿ ಆಯ್ಕೆ ಮಾಡಿ ಹಕ್ಕುಪತ್ರ ಕೋರಿ ಜಿಲ್ಲಾಧಿಕಾರಿಗಳ ಮೂಲಕ Online ಪ್ರಸ್ತಾವನೆ ಸಲ್ಲಿಕೆಯಾದಲ್ಲಿ ನಿಗಮದಿಂದ ಹಕ್ಕುಪತ್ರಗಳನ್ನು ನೀಡಲಾಗುವುದು. |

ಸಂಖ್ಯೆ: ವಇ 511 ಹೆಚ್‌ಎಎಂ 2025

(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು